

ಅರುಣ ಪಿ. ಭಟ್ಟ

## ವಾರಭವಿಷ್ಯ: 14.11.2024ರಿಂದ 20.11.2024ರವರೆಗೆ




ಸಾಹಿತ್ಯ ಕ್ಷೇತ್ರದಲ್ಲಿ ಇರುವವರಿಗೆ ಪ್ರಗತಿ. ವಿದ್ಯಾರ್ಥಿಗಳಿಗೆ ಶೈಕ್ಷಣಿಕವಾದ ಪ್ರಗತಿ ಇದೆ. ಆದಾಯ ಮೂಲದಿಂದ ಹೆಚ್ಚುವರಿ ಅನುಕೂಲ ಪಡೆಯಲಿದ್ದೀರಿ. ವೈಯಕ್ತಿಕ ಸಂಬಂಧಗಳು ಸುಮಧುರವಾಗಿ ಇರುತ್ತವೆ. ಇದರಿಂದ ನಿಮ್ಮ ಸಂತೋಷ ಹೆಚ್ಚಾಗಲಿದೆ. ನೀವು ತೆಗೆದುಕೊಂಡ ನಕಾರಾತ್ಮಕ ನಿರ್ಧಾರಗಳನ್ನು ಸರಿಪಡಿಸಿಕೊಳ್ಳುವ ಬಗ್ಗೆ ಆಲೋಚನೆ ಮಾಡುತ್ತೀರಿ. ಶುಭದಿನ 15: ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ಕೌಟುಂಬಿಕ ವಿಚಾರಗಳಲ್ಲಿ ಉತ್ತಮವಾದ ಪ್ರಗತಿಯನ್ನು ಕಾಣಲಿದ್ದೀರಿ. ಮಾರಾಟ ವಿಭಾಗದಲ್ಲಿ ಕೆಲಸ ನಿರ್ವಹಿಸುವವರು ಗುರಿ ಮುಟ್ಟುವಲ್ಲಿ ಸಫಲರಾಗುತ್ತೀರಿ. ಬಂಡವಾಳ ಹೂಡಿಕೆಗೆ ಹಲವು ಅವಕಾಶಗಳನ್ನು ಪರಿಶೀಲಿಸಿ. ಮದುವೆ ಸಂಬಂಧಗಳನ್ನು ಹುಡುಕುತ್ತಿದ್ದಲ್ಲಿ ಯಶಸ್ಸು ಹೆಚ್ಚಾಗಿದೆ. ನಿಮ್ಮ ಸಹಾಯ ಕೇಳಿದವರಿಗೆ ಸಹಾಯವನ್ನು ಮಾಡುವಿರಿ. ಶುಭದಿನ 16: ಶ್ರೀ ಲಕ್ಷ್ಮೀನರಸಿಂಹ ಪಂಚರತ್ನ ಸ್ತೋತ್ರ ಪಠಿಸಿರಿ.




ನೀವು ನಂಬಿದ ವಿಚಾರಗಳನ್ನು ಪ್ರಸ್ತುತ ಪಡಿಸುವುದಕ್ಕೆ ಬಹಳ ಶ್ರಮ ಪಡುತ್ತೀರಿ. ಸ್ನೇಹಿತರು ಸಾಲ ಕೇಳಿದರು ಎಂದು ನೀಡಿದರೆ ವಾಪಸ್ ಬರುವುದು ಕಷ್ಟ. ಕಾನೂನು ವಿಚಾರಗಳು ನಿಮ್ಮ ವಿರುದ್ಧ ಸಾಗುತ್ತವೆ. ಬೇರೊಬ್ಬರು ನೀಡಿದ ವಸ್ತುಗಳನ್ನು ಕಳೆದುಕೊಳ್ಳುವ ಸಾಧ್ಯತೆ ಇದೆ. ವಾಹನ ಚಾಲನೆ ಮಾಡುವಾಗ ಎಚ್ಚರ. ಹತ್ತಿರದ ಪ್ರವಾಸ ಕೈಗೊಳ್ಳಲಿದ್ದೀರಿ. ಶುಭದಿನ 17: ಗಣೇಶಪಂಚರತ್ನ ಸ್ತೋತ್ರ ಪಠಣ ಮಾಡಿರಿ.




ಒಂದೇ ಸಲಕ್ಕೆ ಹಲವು ಅವಕಾಶಗಳು ನಿಮ್ಮನ್ನು ಹುಡುಕಿಕೊಂಡು ಬರುತ್ತವೆ. ನೌಕರರಿಗೆ ವರ್ಗಾವಣೆ ಆದರೂ ಆಗಬಹುದು. ವೈಯಕ್ತಿಕ ಸಂಬಂಧದಲ್ಲಿ ಬಹಳ ಹುಷಾರಾಗಿರಬೇಕು. ಕೋರ್ಟ್ ಪ್ರಕರಣ ನಡೆಯುತ್ತಿದ್ದರೆ ಆ ಕಡೆ ಹೆಚ್ಚಿನ ಗಮನ ನೀಡಬೇಕು. ಇಲ್ಲದಿದ್ದಲ್ಲಿ ದೊಡ್ಡ ಮಟ್ಟದಲ್ಲಿ ನಷ್ಟ ಅನುಭವಿಸಬೇಕಾಗುತ್ತದೆ. ಅವಕಾಶಗಳು ಹುಡುಕಿಕೊಂಡು ಬರುತ್ತವೆ. ಶುಭದಿನ 18: ಕಾಲಭೈರವಾಷ್ಟಕ ಸ್ತೋತ್ರ ಪಠಿಸಿರಿ.




ವಾರದ ಶುರುವಿನಿಂದಲೇ ಅಂದುಕೊಂಡ ಯೋಜನೆಗಳನ್ನು ಪೂರ್ಣಗೊಳಿಸಲು ಸಾಧ್ಯವಾಗುತ್ತದೆ. ನಿಮ್ಮ ಮೇಲಧಿಕಾರಿಗಳಿಗೆ ಕೆಲಸದ ಪ್ರಗತಿ ಬಗ್ಗೆ ವರದಿ ನೀಡುತ್ತೀರಿ. ಉದ್ಯೋಗ ಜೀವನದಲ್ಲಿ ಹೆಮ್ಮೆ ಪಡುವಂಥ ಸನ್ನಿವೇಶ ಇದಾಗಿರುತ್ತದೆ. ಆರೋಗ್ಯ ಉತ್ತಮವಾಗಿರುತ್ತದೆ. ಮುಂಚಿತವಾಗಿ ಕೆಲಸಗಳನ್ನು ಪೂರೈಸಲು ಸಾಧ್ಯವಾಗುತ್ತದೆ. ಶುಭದಿನ 19. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ಪುಣ್ಯಕ್ಷೇತ್ರ ದರ್ಶನಕ್ಕೆ ತೆರಳುವ ಸಾಧ್ಯತೆ. ಅಗತ್ಯಕ್ಕೆ ತಕ್ಕಂತೆ ಈ ವಾರ ಕೆಲ ನಿಯಮಗಳನ್ನು ಅಳವಡಿಸಿಕೊಳ್ಳಲಿದ್ದೀರಿ. ಕೆಲವು ಕೆಲಸಗಳನ್ನು ಪೂರ್ಣಗೊಳಿಸುವ ನಿಟ್ಟನಲ್ಲಿ ನಿಮ್ಮ ಸೋದರ ಸೋದರಿ ಸಹಾಯಕ್ಕೆ ನಿಲ್ಲುತ್ತಾರೆ. ಅದಕ್ಕಾಗಿ ಅವರಿಗೆ ಗೌರವ ಹಾಗೂ ಅಧಿಕಾರ ನೀಡುತ್ತೀರಿ. ಮನೆಯಲ್ಲಿ ಸಂತಸದ ವಾತಾವರಣ ಇರುತ್ತದೆ. ಶುಭದಿನ 20: ಆದಿತ್ಯ ಹೃದಯ ಪಠಿಸಿರಿ.




ಕುಟುಂಬ ಸದಸ್ಯರ ಜೊತೆಗೆ ಹೆಚ್ಚಿನ ಸಮಯ ಕಳೆಯುವ ಸಾಧ್ಯತೆ ಇದೆ. ಹಿಂದೆಂದಿಗಿಂತಲೂ ಈ ವಾರ ಹೆಚ್ಚು ಚಟುವಟಿಕೆಯಿಂದ ನೀವು ಇರಬೇಕಾಗುತ್ತದೆ. ಕಾನೂನಿಗೆ ಸಂಬಂಧಿಸಿದ ವಿಚಾರಗಳಲ್ಲಿ ತೊಡಗಿಕೊಳ್ಳಬೇಕಾದ ಅಗತ್ಯ ಕಂಡುಬರುತ್ತದೆ. ನೀವು ಪ್ರತಿನಿಧಿಸುವ ಸಂಸ್ಥೆಯ ಸಾಮರ್ಥ್ಯವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕೆಲವು ಸೂತ್ರಗಳನ್ನು ರೂಪಿಸಲಿದ್ದೀರಿ. ಶುಭದಿನ 15: ಚಂಡಿ ಪಾರಾಯಣ ಮಾಡಿರಿ.




ವಾರದ ಮೊದಲ ಭಾಗದಲ್ಲಿ ಅತಿ ಮುಖ್ಯವಾದ ಕೆಲಸ ಮುಗಿಸಿಕೊಳ್ಳಿ. ಗುಣಮಟ್ಟದ ನಿರ್ಧಾರದಿಂದ ಮೆಚ್ಚುಗೆಗೆ ಪಾತ್ರರಾಗುತ್ತೀರಿ. ಸಾರ್ವಜನಿಕ ಮನ್ನಣೆ ದೊರೆಯುವ ಅವಕಾಶಗಳು ನಿಚ್ಚಳವಾಗಿವೆ. ಹೊಸ ಕೆಲಸಕ್ಕೆ ಪ್ರಯತ್ನ ಮಾಡುತ್ತಿರುವವರು ಶ್ರಮವನ್ನು ಹೆಚ್ಚಿಸಬೇಕು. ಸಮಾಜದಲ್ಲಿ ಅತಿ ಮುಖ್ಯವಾದ ಹುದ್ದೆಗೆ ನಿಮ್ಮ ಹೆಸರನ್ನು ಸೂಚಿಸುವ ಸಾಧ್ಯತೆ ಇದೆ. ಶುಭದಿನ 18: ಲಕ್ಷ್ಮೀನರಸಿಂಹ ಸ್ತೋತ್ರ ಪಠಿಸಿರಿ.




ಗ್ರಹಗತಿಗಳು ನಿಮ್ಮ ಕಡೆಗೆ ಶುಭ ದೃಷ್ಟಿ ಬೀರುತ್ತಿವೆ. ನಿಮ್ಮ ಹಲವು ಕೆಲಸಗಳಿಗೆ ಈ ವಾರ ಪರಿಹಾರ ಸಿಗಲಿದೆ. ನಿಮಗೆ ಯಶಸ್ಸು ದೊರೆಯಲಿದೆ. ಮುಖ್ಯವಾದ ಚರ್ಚೆ ಕೂಡ ನಡೆಸುವ ಸಾಧ್ಯತೆ ಇದೆ. ಈ ಅವಧಿಯಲ್ಲಿ ಹೆಚ್ಚು ಸಮಾಧಾನ ಹಾಗೂ ಸಂತೋಷದಿಂದ ಕಾಣಿಸಿಕೊಳ್ಳುತ್ತೀರಿ. ಸ್ಥಿರಾಸ್ತಿ ವ್ಯವಹಾರಗಳಿಗೆ ಸಂಬಂಧಿಸಿದಂತೆ ಉದ್ವೇಗ ಇದ್ದೇ ಇರುತ್ತದೆ. ಶುಭದಿನ. 16. ಸುಬ್ರಹ್ಮಣ್ಯ ಸ್ವಾಮಿಗೆ ಕ್ಷೀರಾಭಿಷೇಕ ಮಾಡಿರಿ.




ವಾರದ ಆರಂಭದಲ್ಲಿ ವೃತ್ತಿಪರರಿಗೆ ಅಧಿಕ ಅವಕಾಶಗಳು ದೊರೆಯುತ್ತವೆ. ದೊಡ್ಡ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುವ ಆಸೆ ಪೂರೈಸುತ್ತದೆ. ಉನ್ನತ ವಿದ್ಯಾಭ್ಯಾಸಕ್ಕಾಗಿ ಸ್ಥಳಾಂತರ ಆಗುವ ಸಾಧ್ಯತೆಗಳಿವೆ. ಸಂಗಾತಿ ಜೊತೆಗೆ ಸಂತಸದಿಂದ ಇರಲಿದ್ದೀರಿ. ಅಧಿಕಾರಿಗಳೊಂದಿಗೆ ಭಿನ್ನಾಭಿಪ್ರಾಯ ಎದುರಾಗಬಹುದು. ಸಣ್ಣ ಪುಟ್ಟ ವಿಷಯಗಳ ನಿರ್ಲಕ್ಷ್ಯ ಬೇಡ. ಶುಭದಿನ 15: ರಾಘವೇಂದ್ರ ಸ್ವಾಮಿಗಳ ಆರಾಧನೆ ಮಾಡಿರಿ.




ಹಿರಿಯ ಅಧಿಕಾರಿಗಳ ಸಹಾಯದಿಂದ ನಿಮ್ಮ ಕೌಶಲವನ್ನು ಹೆಚ್ಚು ಮಾಡಿಕೊಳ್ಳುತ್ತೀರಿ. ವೈಯಕ್ತಿಕ ಸಂಬಂಧ ಸಂತೋಷದಿಂದ ಇರುತ್ತದೆ. ವಾರದ ಮಧ್ಯ ಭಾಗದಲ್ಲಿ ಪ್ರೀತಿಪಾತ್ರರಿಗೆ ಮತ್ತಷ್ಟು ಹತ್ತಿರವಾಗುತ್ತೀರಿ. ನೀವು ತುಂಬ ನಂಬುವ ವ್ಯಕ್ತಿಯಿಂದಲೇ ವಂಚನೆ ಆಗುವ ಸಾಧ್ಯತೆ ಇದೆ. ಜೀವನಶೈಲಿ ಹೆಚ್ಚಿಸಿಕೊಳ್ಳಲು ನಿರ್ಧಾರ ಮಾಡುತ್ತೀರಿ. ಶುಭದಿನ 17: ಗೋಪೂಜೆ ಮಾಡಿ. ಶಿವಕವಚ ಪಠಿಸಿರಿ.




ವೃತ್ತಿ ಬದುಕಿನಲ್ಲಿ ಲಾಭ ಹಾಗೂ ಮಹತ್ತರವಾದ ಪ್ರಗತಿ ಕಾಣುವ ಯೋಗವಿದೆ. ಎಲೆಕ್ಟ್ರಾನಿಕ್ ವಸ್ತು ಖರೀದಿ ಮಾಡಲಿದ್ದೀರಿ. ಶೈಕ್ಷಣಿಕ ಅರ್ಹತೆ ಹೆಚ್ಚಿಸಿಕೊಳ್ಳಲು ಪ್ರಯತ್ನಿಸುತ್ತೀರಿ. ಆರೋಗ್ಯ ಚೆನ್ನಾಗಿರುತ್ತದೆ. ಕಾನೂನು ವ್ಯಾಜ್ಯಗಳು ಇದ್ದಲ್ಲಿ ಎದುರು ಪಕ್ಷದವರು ಸರಿಸಮವಾದ ಹೋರಾಟ ಮಾಡುತ್ತಾರೆ. ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳಬಹುದು. ಶುಭದಿನ 19: ದೇವ್ಯಪರಾಧ ಕ್ಷಮಾಪಾಪನಾ ಸ್ತೋತ್ರ ಪಠಿಸಿರಿ.